PAPER CLIPPINGS

DEPARTMENT / SUBJECT: ಸಂಸತ್

NAME OF THE NEWSPAPER: ವಿಶ್ವವಾಣಿ

DATE: 07/03/2020

### ಸಂಸತ್‌ನಲ್ಲಿ ಮುಂದುವರಿದ ಗದ್ದಲ । ಮಾ.11ಕ್ಕೆ ಕಲಾಪ ಮುಂದೂಡಿಕೆ

# ಶಾ ರಾಜೀನಾಮೆಗೆ ಪಟ್ಟು

**ದೆಹಲಿ:** ದೆಹಲಿ ಗಲಭೆ ಮುಂದಿಟ್ಟುಕೊಂಡು ಲೋಕಸಭೆ ಹಾಗೂ ರಾಜ್ಯ ಸಭೆಯಲ್ಲಿ ಪ್ರತಿಪಕ್ಷಗಳ ಸದಸ್ಯರು ಗದ್ದಲ ಮುಂದುವರಿಸಿರುವ ಹಿನ್ನೆಲೆಯಲ್ಲಿ ಎರಡೂ ಸದನಗಳ ಕಲಾಪವನ್ನು ಮತ್ತೆ ಮುಂದೂಡಲಾಯಿತು.

ರಾಷ್ಟ್ರ ರಾಜಧಾನಿಯಲ್ಲಿ ಪೌರತ್ವ ಕಾಯಿದೆ ಪರ, ವಿರೋಧ ಪ್ರತಿಭಟನೆಯಲ್ಲಿ 48ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದು, ಘಟನೆಯ ನೈತಿಕ ಹೊಣೆ ಹೊತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜೀನಾಮೆ ನೀಡುವಂತೆ ಕಾಂಗ್ರೆಸ್ ಸೇರಿದಂತೆ ಇತರ ಪ್ರತಿಪಕ್ಷಗಳು ಪಟ್ಟು ಹಿಡಿದವು.

ಕಾಂಗ್ರೆಸ್ ಸದಸ್ಯರು ಲೋಕಸಭೆಯಲ್ಲಿ ಶುಕ್ರವಾರವೂ ರಾಜೀನಾಮೆಗೆ ಆಗ್ರಹಿಸಿ ಗದ್ದಲ ಮುಂದುವರಿಸಿದ ಕಾರಣ ಕಲಾಪಕ್ಕೆ ಅಡ್ಡಿಯಾಯಿತು. ಕಾಂಗ್ರೆಸ್ ಹಾಗೂ ಇತರ ಪ್ರತಿಪಕ್ಷ ಸದಸ್ಯರು ಸದನದ ಬಾವಿಗಿಳಿದು ದೆಹಲಿ ಹಿಂಸಾಚಾರದ ಹೊಣೆ ಹೊತ್ತು ಅಮಿತ್ ಶಾ ರಾಜೀನಾಮೆ ನೀಡುವಂತೆ ಕೋಲಾಹಲವೆಬ್ಬಿಸಿದರು. ಈ ಕಾರಣದಿಂದ ಕಲಾಪವನ್ನು ಮಾರ್ಚ್ 11ಕ್ಕೆ ಮುಂದೂಡಲಾಯಿತು. ರಾಜ್ಯಸಭೆಯಲ್ಲಿ ಪದೇ ಪದೇ ಉಪಸಭಾಪತಿಗಳು ಸದಸ್ಯರನ್ನು ಸಮಾಧಾನ ಪಡಿಸಲು ಪ್ರಯತ್ನಿಸಿದರಾದರೂ ಅದು ಫಲ ನೀಡದ ಹಿನ್ನೆಲೆಯಲ್ಲಿ ಅಲ್ಲೂ ಕೂಡ ಕಲಾಪವನ್ನು ನಾಳೆಗೆ ಮುಂದೂಡಲಾಗಿದೆ.



ಗೃಹ ಸಚಿವ ಅಮಿತ್ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷಗಳ ಸದಸ್ಯರು ಸಂಸತ್ ಆವರಣದಲ್ಲಿರುವ ಗಾಂಧಿ ಪ್ರತಿಮೆ ಎದುರು ಕೆಲಕಾಲ ಧರಣಿ ನಡೆಸಿದರು.

**ಖನಿಜ ಕಾನೂನು ಮಸೂದೆ ಅಂಗೀಕಾರ:** ಕೋಲಾಹಲದ ನಡುವೆ ಖನಿಜ ಕಾನೂನು ಮಸೂದೆ ಅಂಗೀಕಾರಗೊಂಡಿದ್ದು, ಈ ಮಸೂದೆಯಲ್ಲಿ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಮತ್ತು ಕಲ್ಲಿದ್ದಲು ಗಣಿಗಾರಿಕೆ (ವಿಶೇಷ ನಿಬಂಧನೆಗಳು)ಕಾಯ್ದೆಗೆ ತಿದ್ದುಪಡಿಗಳನ್ನು ತರಲಾಗಿದೆ.

**ಗದ್ದಲ ತನಿಖೆಗೆ ಸಮಿತಿ ರಚನೆ:** ಸಂಸತ್ತಿನ ಬಜೆಟ್ ಅಧಿವೇಶನದ ಉಳಿದ ಅವಧಿಗೆ ಏಳು ಮಂದಿ ಕಾಂಗ್ರೆಸ್ ಸಂಸದರನ್ನು ಅಮಾನತುಗೊಳಿಸಿದ ದಿನದ ನಂತರ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ರಚಿಸಲಿರುವ ಸಮಿತಿ, ಸಂಸತ್ತಿನ ಕೆಳಮನೆಯಲ್ಲಿ ಮಾರ್ಚ್ 2 ರಿಂದ 5ರವರೆಗೆ ನಡೆದ ಗದ್ದಲಗಳ ಕುರಿತು ತನಿಖೆ ನಡೆಸಲಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ಸಮಿತಿಯು ಎಲ್ಲ ಪಕ್ಷಗಳ ಸದಸ್ಯರನ್ನು ಒಳಗೊಳ್ಳಲಿದೆ. ಸಮಿತಿಯ ನೇತೃತ್ವವನ್ನು ಸ್ಪೀಕರ್ ಓಂ ಬಿರ್ಲಾ ಅವರೇ ವಹಿಸಲಿದ್ದು, ಮಾರ್ಚ್ 2ರಿಂದ 5ರವರೆಗೆ ಲೋಕಸಭೆಯಲ್ಲಿ ನಡೆದ ಎಲ್ಲ ಪ್ರಕ್ರಿಯೆಗಳನ್ನು ತನಿಖೆ ನಡೆಸಿ ತನ್ನ ವರದಿಯನ್ನು ಸಲ್ಲಿಸಲಿದೆ ಎಂದು ಹೇಳಿದ್ದಾರೆ.